# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಕಾರ್ಯಪಾಲಕ ಅಭಿಯಂತರರು ವಾರ್ಡ್ ಸಂಖ್ಯೆ: 89– ಜೋಗುಪಾಳ್ಯ ವಾರ್ಡಿನ ದಿನಾಂಕ: 25.07.2022 ರಂದು ನಡೆದ ಸಭೆಯ ನಡವಳಿಗಳು

ಮಾನ್ಯ ಆಯುಕ್ತರು ಬಿಬಿಎಂಪಿ ರವರ ಕಛೇರಿ ಆದೇಶದ ಸಂಖ್ಯೆ: **ಏ12(5)ಪಿಆರ್/35/2020–21/21-09-2020** ರ ಆದೇಶದಂತೆ ದಿನಾಂಕ: 25.07.2022 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ **ಜೋಗುಪಾಳ್ಯ ವಾರ್ಡ್ ಸಂಖ್ಯೆ-89 ಸಭೆ** Bangalore International Centre, ದೊಮ್ಮಲೂರು ಬೆಂಗಳೂರು – ರಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

ಮಾನ್ಯ ಶ್ರೀ.ಎನ್.ಎ.ಹ್ಯಾರಿಸ್ ಶಾಸಕರು ಶಾಂತಿನಗರ ವಿಧಾನ ಸಭಾ ಕ್ಷೇತ್ರ ರವರ ಅಧ್ಯಕ್ಷತೆಯಲ್ಲಿ ವಾರ್ಡ್ ಸಮಿತಿ ಸಭೆಯು ದಿನಾಂಕ: 25.07.2022ರಂದು ನಡೆಯಿತು.

### ಸಭೆಗೆ ಹಾಜರಿದ್ದವರ ವಿವರಗಳು

1) ಮಾನ್ಯ ಶ್ರೀ.ಎನ್.ಎ.ಹ್ಯಾರಿಸ್ ಶಾಸಕರು ಶಾಂತಿನಗರ ವಿಧಾನ ಸಭಾ ಕ್ಷೇತ್ರ, ಅಧ್ಯಕ್ಷರು.
2) ಶ್ರೀ.ಬಿ ಮಹೇಶ್ ಕುಮಾರ್, ನೋಡಲ್ ಅಧಿಕಾರಿ,ಸಹಾಯಕ ನಿಯಂತ್ರಕರು ಹಣಕಾಸು (ಪೂರ್ವ) ಬಿಬಿಎಂಪಿ.
3) ಶ್ರೀ. ಮೂರ್ತಿ, ವಾರ್ಡ್ ಸಮಿತಿಯ ಕಾರ್ಯದರ್ಶೀ, ಸಹಾಯಕ ಅಭಿಯಂತರರು ಹಾಗೂ ಬಿಬಿಎಂಪಿ ಇತರ ವಿಭಾಗಗಳ ಅಂದರೆ ಆರೋಗ್ಯ, ಕಾಮಗಾರಿ, ಘನತಾಜ್ಯ ವಿಭಾಗ, ಅಧಿಕಾರಿಗಳು, ಮತ್ತು BWSSB ಅಧಿಕಾರಿಗಳು ಹಾಜರಿದ್ದರು.
4) ವಾರ್ಡ್ ಸಮಿತಿ ಸದಸ್ಯರಾದ, ಶ್ರೀ ರಮೇಶ್ ರೆಡ್ಡಿ, ಶ್ರೀಮತಿ ವಿಜಯಲಕ್ಷ್ಮೀ, ಶ್ರೀ ಹೇಮಂತ್ ನಾಗ್, ಶ್ರೀಮತಿ ಗಾಯತ್ರಿ, ಮತ್ತು ಶ್ರೀ ಗಣೇಶ್ ರವರು ಸಭೆಗೆ ಹಾಜರಿದ್ದರು,

ಸಭೆಯನ್ನು ಪ್ರಾರಂಭಿಸುತ್ತಾ ಮೊದಲನೆಯದಾಗಿ ನೋಡಲ್ ಅಧಿಕಾರಿಯವರು ಸಭೆಗೆ ಅಧ್ಯಕ್ಷತೆಯನ್ನು ವಹಿಸಿದ್ದ ಮಾನ್ಯ ಶಾಸಕರು ಮತ್ತು ಹಾಜರಿದ್ದ ಅಧಿಕಾರಿಗಳನ್ನು ಮತ್ತು ಅಹ್ವಾನಿತರಾಗಿದ್ದ ಸ್ಥಳೀಯರು ನಾಗರೀಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

ವಾರ್ಡ್ ಸಮಿತಿ ಸಭೆಯಲ್ಲಿ ನೀಡಿರುವ ಈ ಕೆಳಕಂಡ ವಾರ್ಡಿನ ಸಮಸ್ಯೆಗಳ ಬಗ್ಗೆ ಚರ್ಚಿಸಲಾಯಿತು.

1. ವಾರ್ಡ್ ಸಮಿತಿ ಸಭೆಯಲ್ಲಿ ವಾರ್ಡಿನ ನಾಗರಿಕರಾದ ಶ್ರೀ ಎಂ.ಮಂಜುನಾಥ್ ರವರು ಲಿಖಿತ ರೂಪದಲ್ಲಿ ಪತ್ರವನ್ನು ನೀಡಿ BWSSB ರವರು ಒಳಚರಂಡಿ ಅಳವಡಿಸಿದ ನಂತರ ರಸ್ತೆ ದುರಸ್ಥಿ ಮಾಡದಿರುವ ಬಗ್ಗೆ ಸೂಕ್ತ ಕ್ರಮಕ್ಕಾಗಿ ಮನವಿ ಮಾಡಿರುತ್ತಾರೆ, ಉದಾ: ಜೋಗುಪಾಳ್ಯ 12ನೇ ಬೀದಿ, 13ನೇ ಬೀದಿ ಅದರ ಅಕ್ಕಪಕ್ಕ ಅಡ್ಡರಸ್ತೆಗಳು ಮತ್ತು ಜೋಗುಪಾಳ್ಯ 5ನೇ ಬೀದಿ ಹಾಗೂ ನಂದನವನ ಡಿ ರಸ್ತೆಗಳಲ್ಲಿ ಒಳಚರಂಡಿ ಪೈಪ್‌ಗಳನ್ನು ಅಳವಡಿಸಲು ರಸ್ತೆಗಳನ್ನು ಅಗೆದು ಸುಮಾರು 2 ವರ್ಷದಿಂದ ರಸ್ತೆಯನ್ನು ದುರಸ್ಥಿಗೊಳ್ಳದೆ ಇರುವುದು ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ. ಇದರಿಂದ ಕೂಡಲೆ ರಸ್ತೆ ದುರಸ್ಥಿಗೊಳಸಬೇಕೆಂದು ಕೋರಿರುತ್ತಾರೆ-ಸಹಾಯಕ ಕಾರ್ಯಪಾಲಕ ಅಭಿಯಂತರರು ಕಾಮಗಾರಿ ವಿಭಾಗ ಬಿಬಿಎಂಪಿ ರವರು ಕ್ರಮವಹಿಸುವುದು.

2. ವಾರ್ಡಿನ ನಿವಾಸಿ ದೂರನ್ನು ನೀಡುತ್ತಾ ಲಿಂಗಯ್ಯನಪಾಳ್ಯ 3ನೇ ಅಡ್ಡರಸ್ತೆ ಜೋಗುಪಾಳ್ಯ ರಸ್ತೆಯು ಕೆಟ್ಟುಹೋಗಿದ್ದು ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು ಕೂಡಲೆ ರಸ್ತೆಗೆ ಕಾಂಕ್ರೀಟ್ ಹಾಕಬೇಕೆಂದು ಹಾಗೂ ವಾರ್ಡಿನ ರಸ್ತೆಗಳಲ್ಲಿ 2 ಕಡೆ ವಾಹನಗಳನ್ನು ನಿಲ್ಲಿಸುವುದರಿಂದ ವಾಹನಗಳೂ ಸಾರಗವಾಗಿ ಒಡಾಡಲು ಹಾಗೂ ಅಲ್ಲಿ ವಾಸಿಸುವ ನಿವಾಸಿಗಳಿಗೆ ಸಹ ತೊಂದರೆಯಾಗುತ್ತಿದ್ದು ಕೂಡಲೆ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಿರುತ್ತಾರೆ- ಸಹಾಯಕ ಕಾರ್ಯಪಾಲಕ ಅಭಿಯಂತರರು ಕಾಮಗಾರಿ ವಿಭಾಗ ಬಿಬಿಎಂಪಿ ಹಾಗೂ ಅರಕ್ಷಕರು ಕ್ರಮವಹಿಸುವುದು.

ಅಂತಿಮವಾಗಿ ಮೇಲ್ಕಂಡ ಎಲ್ಲಾ ವಿಷಯಗಳನ್ನು ಚರ್ಚಿಸಲಾಗಿ ಹಾಗೂ ಚರ್ಚಿಸಿದ ವಿಷಯಗಳ ಬಗ್ಗೆ ಅಧಿಕಾರಿಗಳು ಮುಂದಿನ ವಾರ್ಡ್ ಸಮಿತಿ ಸಭೆಗೆ ಸಂಬಂಧಪಟ್ಟ ಅಧಿಕಾರಿಗಳು ಕೈಗೊಂಡ ಕ್ರಮದ ವರದಿಯನ್ನು ನೀಡಲು ಸೂಚಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ನೋಡೆಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ-89- ಜೋಗುಪಾಳ್ಯ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

<u>ಪ್ರತಿಯನ್ನು,</u>

1) ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರು (ಪೂರ್ವ) ರವರ ಮಾಹಿತಿಗಾಗಿ ಕಳುಹಿಸಿಕೊಡಲಾಗಿದೆ.
3) ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
4) ಮಾನ್ಯ ಕೌನ್ಸಿಲ್ ಕಾರ್ಯದರ್ಶಿಯವರಿಗೆ ಕಳುಹಿಸಿದೆ.
5) ವಾಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
6) ಕಛೇರಿ ಪ್ರತಿ.